# ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
# KARNATAKA LEGISLATIVE ASSEMBLY, RESEARCH AND REFERENCE BRANCH

## ಪತ್ರಿಕಾ ತುಣುಕುಗಳು
## PAPER CLIPPINGS

7

ಇಲಾಖೆ / ವಿಷಯ : DEPARTMENT / SUBJECT: ರಾಜ್ಯಸಭೆ ಚುನಾವಣೆ

ಪತ್ರಿಕೆಯ ಹೆಸರು : NAME OF THE NEWS PAPER: ವಿಜಯವಾಣಿ    ದಿನಾಂಕ : DATE 19/11/20

### ರಾಜ್ಯಸಭೆ ಉಪ ಚುನಾವಣೆ, ಬಿಜೆಪಿ ಅಭ್ಯರ್ಥಿ ನಾಮಪತ್ರ ಸಲ್ಲಿಕೆ

# ಕೆ.ನಾರಾಯಣ ಅವಿರೋಧ ಆಯ್ಕೆ?

ವಿಜಯವಾಣಿ ಸುದ್ದಿಜಾಲ ಬೆಂಗಳೂರು 19-11-20

ರಾಜ್ಯಸಭೆ ಉಪ ಚುನಾವಣೆಗೆ ನಾಮಪತ್ರ ಸಲ್ಲಿಸಲು ಕೊನೆಯ ದಿನವಾದ ಬುಧವಾರ ಭಾರತೀಯ ಜನತಾಪಕ್ಷದ ಅಭ್ಯರ್ಥಿಯಾಗಿ ಕೆ.ನಾರಾಯಣ ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿ ಅವರಿಗೆ ನಾಮಪತ್ರ ಸಲ್ಲಿಸಿದರು.

ರಾಜ್ಯಸಭೆ ಸದಸ್ಯರಾಗಿದ್ದ ಅಶೋಕ್ ಗಸ್ತಿ ಅಕಾಲಿಕ ನಿಧನದಿಂದ ತೆರವಾಗಿರುವ ಈ ಸ್ಥಾನಕ್ಕೆ ಉಪ ಚುನಾವಣೆ ನಡೆಯುತ್ತಿದೆ. ರಾಯಚೂರು ಜಿಲ್ಲೆ ಲಿಂಗಸುಗೂರು ತಾಲೂಕಿನ ಗ್ರಾ.ಪಂ. ಮಾಜಿ ಸದಸ್ಯ ಸುಧಾಕರ್ ಬಿಜೆಪಿ ಅಭ್ಯರ್ಥಿಯಾಗಿ ನಾಮಪತ್ರ ಸಲ್ಲಿಸಿದ್ದು, ಸೂಚಕರ ಸಹಿಯಿಲ್ಲ. ಹೀಗಾಗಿ ತಿರಸ್ಕೃತವಾಗಲಿದೆ ಎಂದು ಎಂ.ಕೆ.ವಿಶಾಲಾಕ್ಷಿ 'ವಿಜಯವಾಣಿ'ಗೆ ತಿಳಿಸಿದರು. ಕೆ.ನಾರಾಯಣ ನಾಮಪತ್ರ ಸಲ್ಲಿಸುವ ಸಂದರ್ಭದಲ್ಲಿ ಬಿಜೆಪಿ ರಾಜ್ಯಾಧ್ಯಕ್ಷ ನಳಿನ್ ಕುಮಾರ್ ಕಟೀಲ್, ಸಚಿವ ಕೆ.ಎಸ್.ಈಶ್ವರಪ್ಪ ಹಾಗೂ ಶಾಸಕ ಸುನಿಲ್ ಕುಮಾರ್ ಇದ್ದರು.

ನಾಮಪತ್ರಗಳ ಪರಿಶೀಲನೆ ಕಾರ್ಯ ಗುರುವಾರ ನಡೆಯಲಿದ್ದು, ನಾಮಪತ್ರ ವಾಪಸ್ ಪಡೆಯಲು ನ.23 ಕೊನೆಯ ದಿನವಾಗಿದೆ. ಡಿ.1ರಂದು ಮತದಾನ ನಿಗದಿಯಾಗಿದೆ. ಆದರೆ, ಒಬ್ಬರೇ ಕಣದಲ್ಲಿ ಉಳಿಯುವ ಕಾರಣ ಅವಿರೋಧ ಆಯ್ಕೆ ಬಹುತೇಕ ಖಚಿತವಾಗಿದ್ದು, ಅಧಿಕೃತ ಘೋಷಣೆಯಷ್ಟೇ ಬಾಕಿಯಿದೆ.

**ವರಿಷ್ಠರ ನಿರ್ಧಾರಕ್ಕೆ ಮೆಚ್ಚುಗೆ:** ನಾಮಪತ್ರ ಸಲ್ಲಿಕೆಗೆ ಮುಂಚೆ ಪಕ್ಷದ ರಾಜ್ಯ ಕಚೇರಿಯಲ್ಲಿ ಕೆ.ನಾರಾಯಣ ಅವರಿಗೆ ಬಿ.ಫಾರಂ ವಿತರಿಸಿ ಮಾತನಾಡಿದ ನಳಿನ್ ಕುಮಾರ್ ಕಟೀಲ್, ಮುದ್ರಣ ಉದ್ಯಮಿಯಾಗಿ ತುರ್ತು ಪರಿಸ್ಥಿತಿಯಲ್ಲೇ ಪಕ್ಷದ ಜತೆಗಿದ್ದ ನಾರಾಯಣ ಅವರು, ಕಷ್ಟ ಕಾಲದಲ್ಲಿ ಸಂಘಟನೆಗೆ ನೆರವಾದವರು. ಯಾವುದೇ ಪ್ರತಿಫಲಾಪೇಕ್ಷೆಯಿಲ್ಲದೆ, ಸಾಮಾನ್ಯ ಕಾರ್ಯಕರ್ತನಂತೆ ದುಡಿದವರನ್ನು ಪಕ್ಷದ ವರಿಷ್ಠರು ಗುರುತಿಸಿ ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದ್ದಾರೆ. ಸರಳ, ಸಜ್ಜನಿಕೆಯ ಕಾರ್ಯಕರ್ತನನ್ನು ಅಭ್ಯರ್ಥಿಯನ್ನಾಗಿ ಆಯ್ಕೆ ಮಾಡಿದ ಪಕ್ಷದ ರಾಷ್ಟ್ರೀಯ ಅಧ್ಯಕ್ಷ ಜೆ.ಪಿ.ನಡ್ಡಾ, ಕೇಂದ್ರ ಗೃಹ ಸಚಿವ ಅಮಿತ್ ಶಾ ಹಾಗೂ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರಿಗೆ ಧನ್ಯವಾದ ಸಲ್ಲಿಸುವುದಾಗಿ ಕಟೀಲ್ ಹೇಳಿದರು.



ರಾಜ್ಯಸಭೆ ಉಪ ಚುನಾವಣೆಗೆ ಬಿಜೆಪಿ ಅಭ್ಯರ್ಥಿಯಾಗಿ ಕೆ.ನಾರಾಯಣ ಬುಧವಾರ ಚುನಾವಣಾಧಿಕಾರಿ ಎಂ.ಕೆ.ವಿಶಾಲಾಕ್ಷಿಗೆ ನಾಮಪತ್ರ ಸಲ್ಲಿಸಿದರು. ನಳಿನ್‌ಕುಮಾರ್ ಕಟೀಲ್, ಕೆ.ಎಸ್.ಈಶ್ವರಪ್ಪ ಇದ್ದರು.